ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ ದಿನಾಂಕ : DATE 29/3/21


# 1ರಿಂದ 9ನೇ ತರಗತಿ ಮಕ್ಕಳು ಪರೀಕ್ಷೆ ಇಲ್ಲದೆ ಉತ್ತೀರ್ಣ?

## ಕೊರೋನಾ ಹೆಚ್ಚಳ: ಕಡ್ಡಾಯವಾಗಿ ಪಾಸ್ ಮಾಡಲು ನಿರ್ಧಾರ ಪರೀಕ್ಷೆ ನಡೆಸಬೇಕಾ ಎಂಬ ಬಗ್ಗೆ ಇಂದು ತೀರ್ಮಾನ: ಡಾ|ಸುಧಾಕರ್

• **ಕನ್ನಡಪ್ರಭ ವಾರ್ತೆ** ಬೆಂಗಳೂರು

'1ರಿಂದ 9ನೇ ತರಗತಿ ಮಕ್ಕಳನ್ನು ಮುಂದಿನ ತರಗತಿಗೆ ಕಡ್ಡಾಯವಾಗಿ ಉತ್ತೀರ್ಣ ಮಾಡಲು ತೀರ್ಮಾನಿಸಲಾಗಿದೆ. ಆದರೆ ಕೊರೋನಾ ಪ್ರಕರಣಗಳು ಹೆಚ್ಚಾಗುತ್ತಿರುವ ಕಾರಣ ಪರೀಕ್ಷೆ ನಡೆಸದೇ ಹಾಗೆಯೇ ಉತ್ತೀರ್ಣ ಮಾಡಬೇಕೇ, ಬೇಡವೇ ಎಂಬ ಬಗ್ಗೆ ಸೋಮವಾರ ಮುಖ್ಯಮಂತ್ರಿಗಳ ಜೊತೆ ಚರ್ಚಿಸಿ ತೀರ್ಮಾನಿಸಲಾಗುವುದು' ಎಂದು ಆರೋಗ್ಯ ಸಚಿವ ಡಾ| ಕೆ. ಸುಧಾಕರ್ ಹೇಳಿದ್ದಾರೆ. ↘ 8



**ತೀರ್ಮಾನ ಇನ್ನೂ ಆಗಿಲ್ಲ**

**ವಿದ್ಯಾರ್ಥಿಗಳನ್ನು ಪರೀಕ್ಷೆ ಇಲ್ಲದೆ ಪಾಸ್ ಮಾಡುವ ಸಂಬಂಧ ಇಲ್ಲಿಯವರೆಗೆ ಯಾವುದೇ ನಿರ್ಣಯವನ್ನು ಕೈಗೊಂಡಿಲ್ಲ. ಇಲಾಖೆಯಲ್ಲಿ ಚರ್ಚಿಸಿ ನಿರ್ಧಾರ ಕೈಗೊಳ್ಳಲಾಗುತ್ತದೆ.**

• **ಸುರೇಶ್‌ಕುಮಾರ್**
ಶಿಕ್ಷಣ ಸಚಿವ

### ಪರೀಕ್ಷೆಗೆ ಅನುಮತಿ ನೀಡಿ: ಶಾಲೆಗಳು

ಬೆಂಗಳೂರು: ಪರೀಕ್ಷೆ ಮುಂದೂಡದೆ ಕೂಡಲೇ 6ರಿಂದ 9ನೇ ತರಗತಿ ಮಕ್ಕಳಿಗೆ ಪರೀಕ್ಷೆ ನಡೆಸಬೇಕು. ಶಾಲೆಗಳು ತಮಗೆ ಅನುಕೂಲವಾಗುವ ರೀತಿಯಲ್ಲಿ ಪರೀಕ್ಷೆ ನಡೆಸಲು ಅನುಮತಿ ನೀಡಬೇಕು ಎಂದು ಖಾಸಗಿ ಶಾಲೆಗಳ ಒಕ್ಕೂಟ (ಕ್ಯಾಮ್ಸ್) ಶಿಕ್ಷಣ ಸಚಿವರಿಗೆ ಪತ್ರ ಬರೆದು ಮನವಿ ಮಾಡಿದೆ. ವಿವರ ↘ 4

# ಪರೀಕ್ಷೆ ಇಲ್ಲದೆ ಉತ್ತೀರ್ಣ?

↙ ಮೊದಲ ಪುಟದಿಂದ

ಸುದ್ದಿಗಾರರ ಜೊತೆ ಮಾತನಾಡಿದ ಅವರು, 'ಕೊರೋನಾ ಕಾರಣದಿಂದ ಎಲ್ಲ ಶಾಲೆಗಳು ನಡೆದಿಲ್ಲ, ಇಲ್ಲವೇ ನಡೆದಿರುವ ಶಾಲೆಗಳಿಗೆ ಅನೇಕ ಮಕ್ಕಳು ಹಾಜರಾಗಿಲ್ಲ. ಈ ಎಲ್ಲ ಅಂಶಗಳ ಹಿನ್ನೆಲೆಯಲ್ಲಿ ಮುಖ್ಯಮಂತ್ರಿಗಳು ಹಾಗೂ ಶಿಕ್ಷಣ ಸಚಿವರ ಜೊತೆ ಚರ್ಚಿಸಿ ನಿರ್ಧರಿಸಲಾಗುವುದು' ಎಂದರು.



**ಕೊರೋನಾ ನಿಯಂತ್ರಣದ ಬಗ್ಗೆ ಚರ್ಚೆ:** ಕೊರೋನಾ ಸೋಂಕು ವೇಗವಾಗಿ ಹಬ್ಬುತ್ತಿರುವ ಹಿನ್ನೆಲೆಯಲ್ಲಿ ನಿಯಂತ್ರಣ ಕ್ರಮಗಳಿಗೆ ಗೃಹ ಇಲಾಖೆಯ ನೆರವು ಪಡೆಯುವ ನಿಟ್ಟಿನಲ್ಲಿ ಚರ್ಚೆ ನಡೆಸಿದ್ದೇವೆ. ಗಡಿ ಭಾಗದಲ್ಲಿ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು, ಬೆಂಗಳೂರಿಗೆ ಬರುವವರ ಮೇಲೆ ನಿಗಾ ಇಡುವ ಕ್ರಮಗಳನ್ನು ಗೃಹ ಇಲಾಖೆ ಕೈಗೊಳ್ಳಬೇಕಿರುವ ಹಿನ್ನೆಲೆಯಲ್ಲಿ ಚರ್ಚೆ ನಡೆಸಿದ್ದೇವೆ. ಮಹಾರಾಷ್ಟ್ರದ ನಾಗ್ಪುರ ಲಾಕ್ ಡೌನ್, ಸೀಲ್ ಡೌನ್ ಆಗಿರುವುದನ್ನು ಗಮನಿಸಿದ್ದೇವೆ. ಸೋಮವಾರ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ನಮ್ಮ ರೂಪುರೇಷೆಗಳನ್ನು ಅಂತಿಮಗೊಳಿಸುತ್ತೇವೆ ಎಂದು ಅವರು ಹೇಳಿದರು.

'ಮಹಾರಾಷ್ಟ್ರದಲ್ಲಿ ಪ್ರತಿ ದಿನ 36 ಸಾವಿರಕ್ಕೂ ಹೆಚ್ಚು ಪ್ರಕರಣಗಳ ಬರುತ್ತಿದೆ. ಒಮ್ಮೆ ಸೋಂಕಿನ ಪ್ರಮಾಣ ಹೆಚ್ಚಾದರೆ ಎಲ್ಲ ಆಸ್ಪತ್ರೆಗಳ ಮೇಲೆ ಹೊರೆ ಹೆಚ್ಚಾಗುತ್ತದೆ. ಆಗ ನಿಯಂತ್ರಣ ಕಷ್ಟ. ಹೊಸ ಪ್ರಕರಣಗಳೊಂದಿಗೆ ಸಾವಿನ ಪ್ರಮಾಣವೂ ಹೆಚ್ಚಾಗುತ್ತದೆ. ಅದನ್ನು ತಪ್ಪಿಸಬೇಕಾದರೆ ಮುಂದಿನ 6 ರಿಂದ 8 ವಾರ ಅತಿ ಮುಖ್ಯ. ಕೋವಿಡ್ ತಾಂತ್ರಿಕ ಸಲಹಾ ಸಮಿತಿ ಈಗಾಗಲೇ 4 ರಿಂದ 8 ವಾರ ಬಹಳ ಗಟ್ಟಿ ಕ್ರಮ ಕೈಗೊಳ್ಳಬೇಕು, ಇಲ್ಲದೇ ಹೋದರೆ ಸಂಕಷ್ಟಕ್ಕೆ ಸಿಲುಕಬಹುದು ಎಂದು ಹೇಳಿದೆ. ಆದ್ದರಿಂದ ಗೃಹ, ಕಂದಾಯ, ಶಿಕ್ಷಣ ಸಚಿವರ ಜೊತೆ ಮುಖ್ಯಮಂತ್ರಿಗಳು ಸಭೆ ನಡೆಸಿ ಬಿಗಿ ಕ್ರಮ ಕೈಗೊಳ್ಳಲು ಮುಂದಾಗುತ್ತೇವೆ. ಗಡಿ ಬಂದ್ ಮಾಡ ಬಾರದು ಎಂದು ಕೇಂದ್ರದ ಸ್ಪಷ್ಟ ಸೂಚನೆ ಇದೆ. ಆದ್ದರಿಂದ ಗಡಿ ಬಂದ್ ಮಾಡದೇ ಇದ್ದರೂ ಬರುವವರ ಮೇಲೆ ನಿಗಾ ಇಡುತ್ತೇವೆ' ಎಂದು ಹೇಳಿದರು.

ತುಮಕೂರಿನಲ್ಲೂ ಡಿ.ಕೆ.ಶಿವಕುಮಾರ್ ವಿರುದ್ಧ ಪ್ರತಿಭಟನೆ